## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದೇವನಹಳ್ಳಿ, ಶಿಗ್ಗಾಂವ್ ಮತ್ತು ಮಾಗಡಿ ತಾಲ್ಲೂಕಿನಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (GTTC)ಗಳಲ್ಲಿ Aerospace, Precision Engineering, Mechatronics, Electronic ಮತ್ತು Industrial Automation ಕ್ಷೇತ್ರಗಳಲ್ಲಿ ತರಬೇತಿದಾರರಿಗೆ ತರಬೇತಿ ಕೇಂದ್ರುವನ್ನು ಸ್ಥಾಪಿಸುವ ಕುರಿತು.

**ಓದಲಾಗಿದೆ:** 1. 2022-23ನೇ ಸಾಲಿನ ಆಯವ್ಯಯ ಘೋಷಣ ಕಂಡಿಕೆ-207
2.ವ್ಯವಸ್ಥಾಪಕ ನಿರ್ದೇಶಕರು, ಜಿಟಿಟಿಸಿ ಇವರ ಪತ್ರ ಸಂಖ್ಯೆ:ಜಿಟಿಟಿಸಿ/ವ್ಯನಿಕ/2022-3:ಆಯವ್ಯಯ/ಘೋಷಣೆ/2022, ದಿನಾಂಕ:30-03-2022

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:1ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಕಂಡಿಕೆ-207ರಲ್ಲಿ ಮಂಡಿಸಿರುವ 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ "**ದೇವನಹಳ್ಳಿ, ಶಿಗ್ಗಾಂವ್ ಮತ್ತು ಮಾಗಡಿ ತಾಲ್ಲೂಕಿನಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (GTTC)ಗಳಲ್ಲಿ Aerospace, Precision Engineering, Mechatronics, Electronic ಮತ್ತು Industrial Automation ಕ್ಷೇತ್ರಗಳಲ್ಲಿ ತರಬೇತಿದಾರರಿಗೆ ತರಬೇತಿ ಕೇಂದ್ರುವನ್ನು ಸ್ಥಾಪಿಸಲಾಗುವುದು**" ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:2ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಜಿಟಿಟಿಸಿ ಇವರು 2022-23ನೇ ಸಾಲಿನ ಆಯವ್ಯಯದ ಕ್ರಮ ಸಂಖ್ಯೆ:207ರಲ್ಲಿ "ದೇವನಹಳ್ಳಿ, ಶಿಗ್ಗಾಂವಿ ಮತ್ತು ಮಾಗಡಿ ತಾಲ್ಲೂಕಿನಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (GTTC) ಗಳಲ್ಲಿ Aerospace, Precision Engineering, Mechatronics, Electronic ಮತ್ತು Industrial Automation ಕ್ಷೇತ್ರಗಳಲ್ಲಿ ತರಬೇತಿದಾರರಿಗೆ ತರಬೇತಿ ಕೇಂದ್ರುವನ್ನು ಸ್ಥಾಪಿಸಲಾಗುವುದು" ಎಂದು ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿರುವ ಹಿನ್ನೆಲೆಯಲ್ಲಿ ಮಾಗಡಿ ಮತ್ತು ದೇವನಹಳ್ಳಿ ಕೇಂದ್ರಗಳನ್ನು ಸ್ಥಾಪಿಸಲು ಸಚಿವ ಸಂಪುಟದ ಅನುಮೋದನೆ ನೀಡಲಾಗಿದ್ದು, NABARD Tranche XXVII ರಲ್ಲಿ ವೆಚ್ಚವನ್ನು ಭರಿಸಿ ಕಟ್ಟಡ ಕಾಮಗಾರಿಗಳು ಪ್ರಗತಿಯಲ್ಲಿದ್ದು ಮಾಗಡಿ ಕೇಂದ್ರಕ್ಕೆ ಹೆಚ್ಚುವರಿ ಕೊಠಡಿಗಳು ಮತ್ತು 7 ಪ್ರಯೋಗಾಲಯಗಳನ್ನು ಸ್ಥಾಪಿಸಲು ರೂ.9.80 ಕೋಟಿಗಳ ಹೆಚ್ಚುವರಿ ಅನುದಾನದ ಅವಶ್ಯಕತೆಯಿದ್ದು ಸದರಿ ಅನುದಾನವನ್ನು Tranche XXVIIIರಲ್ಲಿ ಒದಗಿಸುವಂತೆ ಕೋರಿರುತ್ತಾರೆ.

ಮುಂದುವರೆದು ಶಿಗ್ಗಾಂವಿ ಕೇಂದ್ರುವನ್ನು ಹೊಸದಾಗಿ ಸ್ಥಾಪಿಸಲು ಮಾನ್ಯ ಮುಖ್ಯಮಂತ್ರಿಗಳು 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿರುವುದರಿಂದ ಸದರಿ ಕೇಂದ್ರದ ತರಬೇತಿ ಕಾರ್ಯಗಾರ, ವಿದ್ಯಾರ್ಥಿನಿಲಯ, ಸಿಬ್ಬಂದಿ ವಸತಿ ಗೃಹ, ಅಭಿವೃದ್ಧಿ ಕಾಮಗಾರಿಗಳು, ಪೀಠೋಪಕರಣ ಮತ್ತು ಇತರೆ ವೆಚ್ಚಗಳಿಗಾಗಿ ಹಾಗೂ ಯಂತ್ರೋಪಕರಣಕ್ಕಾಗಿ ರೂ.73.78 ಕೋಟಿಗಳನ್ನು NABARD Tranche XXVIII ರಲ್ಲಿ ಒದಗಿಸಬೇಕಾಗುತ್ತದೆ.

--2

ಆದುದರಿಂದ ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಒಟ್ಟು ರೂ.83.58 ಕೋಟಿಗಳ (ಮಾಗಡಿಗೆ ರೂ.9.80+ಶಿಗ್ಗಾಂವಿಗೆ ರೂ.73.78 ಕೋಟಿಗಳು) ಹೆಚ್ಚುವರಿ ಅನುದಾನವನ್ನು ಒದಗಿಸಲು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಕೌಉಜೀಇ 40 ಉಜೀಇ 2022, ಬೆಂಗಳೂರು, ದಿನಾಂಕ:13-04-2022**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಮಾನ್ಯ ಮುಖ್ಯಮಂತ್ರಿಯವರು 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 207ರಲ್ಲಿ ಮಂಡಿಸಿರುವ ಘೋಷಣೆಯಂತೆ **ದೇವನಹಳ್ಳಿ, ಶಿಗ್ಗಾಂವ್ ಮತ್ತು ಮಾಗಡಿ ತಾಲ್ಲೂಕಿನಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (GTTC)ಗಳಲ್ಲಿ Aerospace, Precision Engineering, Mechatronics, Electronic ಮತ್ತು Industrial Automation ಕ್ಷೇತ್ರಗಳಲ್ಲಿ ತರಬೇತಿದಾರರಿಗೆ ತರಬೇತಿ ಕೇಂದ್ರವನ್ನು ಸ್ಥಾಪಿಸಲು** 2022-23ನೇ ಸಾಲಿನಲ್ಲಿ ನಬಾರ್ಡ್ ಯೋಜನೆಯಡಿ ಒದಗಿಸಲಾಗಿರುವ ಅನುದಾನದಿಂದ ಯೋಜನೆ ಅನುಷ್ಠಾನಗೊಳಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 275 ವೆಚ್ಚ-9/2022, ದಿನಾಂಕ:11-04-2022 ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: PDS/54/MED/2022, ದಿನಾಂಕ:08-04-2022 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

13/04/2022

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ), ಕರ್ನಾಟಕ ಬೆಂಗಳೂರು.
2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಜಿಟಿಟಿಸಿ, ಬೆಂಗಳೂರು.
4. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

5. ಉಪ ನಿರ್ದೇಶಕರು, ಖಜಾನೆ ಎನ್.ಎಂ.ಸಿ ಖನಿಜ ಭವನ, ರೇಸ್ ಕೋರ್ಸ್‌ರೋಡ್, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ 3& 9, ವಿಧಾನ ಸೌಧ ಬೆಂಗಳೂರು.

**ಪ್ರತಿ:-**

1. ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
3. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
4. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
5. ಅಧೀಕ್ಷಕರು, ಶಾಖೆ-1, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.